# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:–** ಶ್ರೀ ನಾಗನಗೌಡ ರೆಡ್ಡಿ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಹರಪನಹಳ್ಳಿ, ದಾವಣಗೆರೆ ಜಿಲ್ಲೆ ಇವರ ವಿರುದ್ಧ ಕರ್ತವ್ಯಲೋಪಕ್ಕೆ ಸಂಬಂಧಿಸಿದಂತೆ ಶಿಸ್ತು ಕ್ರಮ ಜರುಗಿಸುವ ಬಗ್ಗೆ– ಅಂತಿಮ ಆದೇಶ.

*****

**ಓದಲಾಗಿದೆ;–**

1. ಆಯುಕ್ತರು, ಕೃಷಿ ಇಲಾಖೆ, ಇವರ ಪತ್ರ ಸಂಖ್ಯೆ: ಸಿಬ್ಬಂದಿ–1/ವಿಚಾರಣೆ 6/8/2010–11, ದಿನಾಂಕ: 06–09–2011.
2. ಸರ್ಕಾರದ ಕಾರಣ ಕೇಳುವ ನೋಟೀಸು ಸಂ. ಕೃತೋಇ 51 ಕೃಪವಿ 2000, ದಿನಾಂಕ: 15–12–2011.
3. ಶ್ರೀ ನಾಗನಗೌಡ ರೆಡ್ಡಿ, ಸಹಾಯಕ ಕೃಷಿ ನಿರ್ದೇಶಕರು, ಇವರ ಲಿಖಿತ ಸಮಜಾಯಿಷಿ ದಿನಾಂಕ: 28–12–2011. (ಜಂಟಿ ಕೃಷಿ ನಿರ್ದೇಶಕರು, ಬೀದರ್ ಇವರ ಪತ್ರ ದಿನಾಂಕ: 12–01–2012)
4. ಸರ್ಕಾರದ ಆದೇಶ ಸಂಖ್ಯೆ: ಕೃತೋಇ 80 ಕೃಪವಿ 2008, ದಿನಾಂಕ:8–04–2014.
5. ಶ್ರೀ ಘ.ನಿ ಗುಡ್ಡಾಕಾರ, ನಿವೃತ್ತ ಜಿಲ್ಲಾ ಮತ್ತು ಸೇಶನ್ಸ ನ್ಯಾಯಾಧೀಶರು ಹಾಗೂ ವಿಚಾರಣಾಧಿಕಾರಿಗಳು ನೀಡಿದ ವಿಚಾರಣಾ ವರದಿ ದಿನಾಂಕ:22–07–2014.

**ಪ್ರಸ್ತಾವನೆ:–**

ಶ್ರೀ ನಾಗನಗೌಡ ರೆಡ್ಡಿ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಇವರು ದಾವಣಗೆರೆ ಜಿಲ್ಲೆಯ ಹರಪನಹಳ್ಳಿ ತಾಲ್ಲೂಕಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ತಮ್ಮ ಅಧೀನ ಅಧಿಕಾರಿ/ಸಿಬ್ಬಂದಿವರ್ಗದವರಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿ, ಮಾನಸಿಕ ಕಿರುಕುಳ ನೀಡಿರುತ್ತಾರೆಂದು ಹಾಗೂ ಸದರಿ ಅಧಿಕಾರಿಯವರು ಹರಪನಹಳ್ಳಿ ತಾಲ್ಲೂಕಿನ ಬಾಗಳಿ ಗ್ರಾಮದ ಮನೆ ಮತ್ತು ಗೋಡೌನಲ್ಲಿ ಅನಧಿಕೃತವಾಗಿ ಶೇಖರಿಸಲಾದ ಯೂರಿಯಾ ದಾಸ್ತಾನನ್ನು ಜಪ್ತಿ ಮಾಡಿ ಅದನ್ನು ಮಾರಾಟ ಮಾಡಿ ಬಂದ ಹಣವನ್ನು ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಗೆ ಜಮೆ ಮಾಡುವಂತೆ ಜಿಲ್ಲಾಧಿಕಾರಿಗಳು ದಾವಣಗೆರೆ ಇವರು ಸೂಚಿಸಿದ್ದಾಗ್ಯೂ ಸಹ ಇವರು ಯಾವುದೇ ಕ್ರಮ ವಹಿಸದೇ, ಮಾನ್ಯ ಕೃಷಿ ಸಚಿವರಿಗೆ ದಿನಾಂಕ:21–07–2009ರಂದು ಪತ್ರ ಬರೆದು, ಸದರಿ ಜಪ್ತಿ ಮಾಡಿದ ರಸಗೊಬ್ಬರವನ್ನು ಮಾರಾಟ ಮಾಡಿ ಬಂದ ಹಣವನ್ನು ಪಾವತಿ ಮಾಡಲಾಗಿದೆ ಎಂದು ತಪ್ಪು ವರದಿ ನೀಡಿರುವ ಬಗ್ಗೆ ಹಾಗೂ ಸರ್ಕಾರದ ಮಹತ್ವಾಕಾಂಕ್ಷಿ ಕಾರ್ಯಕ್ರಮಗಳಾದ ಕೃಷಿ ಉತ್ಸವ ಕಾರ್ಯಕ್ರಮವನ್ನು ತಾಲ್ಲೂಕಿನಲ್ಲಿ ಅನುಷ್ಠಾನಗೊಳಿಸುವಲ್ಲಿ ಯಾವುದೇ ಪ್ರಯತ್ನ ಮಾಡಿರುವುದಿಲ್ಲವೆಂಬ ಆರೋಪಗಳ ಬಗ್ಗೆ ಶಿಸ್ತುಕ್ರಮ ಜರುಗಿಸಲು ಆಯುಕ್ತರು, ಮೇಲೆ (1)ರಲ್ಲಿ ಓದಲಾದ ಪತ್ರದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದರು.

**2)** ಮೇಲೆ (2)ರಲ್ಲಿ ಓದಲಾದ ದಿನಾಂಕ:15–12–2011ರ ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳ 1957 ರ ನಿಯಮ 11 ರಡಿ ಜಾರಿ ಮಾಡಿ ಲಿಖಿತ ಹೇಳಿಕೆಗಳೇನಾದರೂ ಇದ್ದಲ್ಲಿ ನೀಡುವಂತೆ ಸೂಚಿಸಲಾಗಿತ್ತು.

**3)** ಮೇಲೆ ಕ್ರ.ಸಂ.(3)ರಲ್ಲಿ ಓದಲಾದ ದಿನಾಂಕ:28-12-2011ರ ಸಮಜಾಯಿಷಿಯಲ್ಲಿ ಆಪಾದಿತರು ತಮ್ಮ ಮೇಲಿರುವ ಆರೋಪಗಳನ್ನು ಅಲ್ಲಗಳೆದು ತಮ್ಮನ್ನು ಆರೋಪ ಮುಕ್ತರನ್ನಾಗಿಸುವಂತೆ ಕೋರಿದ್ದರು. ಅವರ ಹೇಳಿಕೆಯನ್ನು ಪರಿಶೀಲಿಸಲಾಗಿ ಸದರಿಯವರು ಆರೋಪ ಎಸಗಿಲ್ಲವೆನ್ನುವುದಕ್ಕೆ ಪೂರಕವಾಗಿ ಪರಿಗಣಿಸುವಂತಹ ಯಾವುದೇ ಅಂಶಗಳು ಅಥವಾ ದಾಖಲೆಗಳು ಸದರಿಯವರ ಲಿಖಿತ ಹೇಳಿಕೆಯಲ್ಲಿ ಕಂಡು ಬಾರದೇ ಇರುವುದರಿಂದ ಈ ಪ್ರಕರಣದಲ್ಲಿಯ ಸತ್ಯಾ-ಸತ್ಯತೆಯನ್ನು ಕಂಡುಕೊಳ್ಳುವ ದೃಷ್ಟಿಯಿಂದ ಅವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಯ ನಿಯಮ 11ರಡಿ ವಿಚಾರಣೆಯನ್ನು ನಡೆಸಲು ನಿರ್ಧರಿಸಿ ಶ್ರೀ ಫ. ನಿ. ಗುಡ್ಡಾಕಾರ, ನಿವೃತ್ತ, ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಗಳನ್ನಾಗಿ ಮೇಲೆ ಕ್ರ.ಸಂ.(4)ರಲ್ಲಿ ಓದಲಾದ ಆದೇಶದಲ್ಲಿ ನೇಮಿಸಲಾಗಿತ್ತು,

**4)** ಮೇಲೆ ಕ್ರ.ಸಂ.(5)ರಲ್ಲಿ ಓದಲಾದ ದಿನಾಂಕ: 22-07-2014 ಪತ್ರದೊಂದಿಗೆ ಶ್ರೀ ಫ. ನಿ. ಗುಡ್ಡಾಕಾರ, ನಿವೃತ್ತ, ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ವಿಚಾರಣಾಧಿಕಾರಿಗಳು ಈ ಪ್ರಕರಣದಲ್ಲಿ ಕೂಲಂಕಷವಾಗಿ ವಿಚಾರಣೆ ನಡೆಸಿ, ಆರೋಪಿತ ಅಧಿಕಾರಿಯವರ ವಿರುದ್ಧ ಯಾವುದೇ ಆರೋಪಗಳು ಸಾಬಿತಾಗಿಲ್ಲವೆಂದು ನಿರ್ಣಯಿಸಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

**5)** ವಿಚಾರಣಾ ವರದಿಯನ್ನು ಪರಿಶೀಲಿಸಿದ ಸರ್ಕಾರವು ಆರೋಪಿತ ಅಧಿಕಾರಿಗಳ ಮೇಲಿನ ಆರೋಪಗಳು ಸಾಬಿತಾಗಿಲ್ಲವೆಂಬ ವಿಚಾರಣಾಧಿಕಾರಿಗಳ ನಿರ್ಣಯವನ್ನು ಒಪ್ಪಿ, ಇವರನ್ನು ಆರೋಪಗಳಿಂದ ಮುಕ್ತಗೊಳಿಸಲು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ

**ಸರ್ಕಾರದ ಆದೇಶ ಸಂ. ಕೃತೋಇ 51 ಕೃಪವಿ 2010 ಬೆಂಗಳೂರು, ದಿನಾಂಕ:20-12-2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ, ಶ್ರೀ. ನಾಗನಗೌಡ ರೆಡ್ಡಿ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಹರಪನಹಳ್ಳಿ, ದಾವಣಗೆರೆ ಜಿಲ್ಲೆ ಹಾಲಿ ಸಹಾಯಕ ಕೃಷಿ ನಿರ್ದೇಶಕರು, ಶಿಗ್ಗಾವಿ, ಹಾವೇರಿ ಜಿಲ್ಲೆ ಇವರನ್ನು ದಿನಾಂಕ: 15-12-2011ರ ಕಾರಣ ಕೇಳುವ ನೋಟೀಸಿನೊಂದಿಗೆ ಜಾರಿ ಮಾಡಲಾದ ದೋಷಾರೋಪಣಾ ಪಟ್ಟಿಯಲ್ಲಿನ ಆರೋಪಗಳಿಂದ ಮುಕ್ತಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಆರ್. ಬಸವರಾಜಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ
(ಸೇವೆಗಳು ಮತ್ತು ಸಮನ್ವಯ)

ಇವರಿಗೆ:-

1. ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ ಜಿಇ-5), ಕರ್ನಾಟಕ, ಬೆಂಗಳೂರು.

2. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
3. ಜಂಟಿ, ಕೃಷಿ, ನಿರ್ದೇಶಕರು, ದಾವಣಗೆರೆ
4. ಸಂಬಂಧಪಟ್ಟ ಅಧಿಕಾರಿಯವರಿಗೆ ( ಕೃಷಿ ಆಯುಕ್ತರ ಮೂಲಕ),
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.